# ಕರ್ನಾಟಕ ಸರ್ಕಾರ, ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ,
# ಐವಾನ–ಎ–ಶಾಹಿ ರಸ್ತೆ, ಕಲಬುರಗಿ

**ಸಂಖ್ಯೆ: ಸಿ1(1) ಆಡಳಿತ ಜೇಪ ಸಿಸಿಟಿ/31/2024–25** ದಿನಾಂಕ: 19.08.2025

## ಅಧಿಸೂಚನೆ

ವಿಷಯ: ದಿನಾಂಕ: 01/01/2025 ರಲ್ಲಿದ್ದಂತೆ, ಶಾಲಾ ಶಿಕ್ಷಣ ಇಲಾಖೆಯ ದ್ವಿತೀಯ ದರ್ಜೆ ಸಹಾಯಕ ಸಹಿತ ಬೆರಳಚ್ಚುಗಾರರ ಅಂತಿಮ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 106 ಸೆನೆನಿ 2021 ದಿನಾಂಕ: 10/12/2021.
2. ಈ ಕಛೇರಿ ಅಧಿಸೂಚನೆ ಸಮ ಸಂಖ್ಯೆ ದಿನಾಂಕ: 15.02.2025

>><><><><<

ಉಲ್ಲೇಖ(1)ರ ಸರ್ಕಾರದ ಅಧಿಕೃತ ಜ್ಞಾಪನದನ್ವಯ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 10ರಡಿ ಜೇಷ್ಠತಾ ಪಟ್ಟಿಗಳನ್ನು ಸಿದ್ದಪಡಿಸುವುದಕ್ಕೆ ಸಂಬಂಧಿಸಿದಂತೆ ಪರಿಷ್ಕೃತ ನಮೂನೆ ಅನುಬಂಧ–1 ಮತ್ತು ಅನುಬಂಧ–2ನ್ನು ಹೊರಡಿಸಲಾಗಿದ್ದು, ಇನ್ನು ಮುಂದೆ ಈ ಪರಿಷ್ಕೃತ ನಮೂನೆಗಳಲ್ಲಿ ಜೇಷ್ಠತಾ ಪಟ್ಟಿಗಳನ್ನು ಪ್ರಕಟಿಸಲು ತಿಳಿಸಲಾಗಿರುತ್ತದೆ.

ದಿನಾಂಕ: 01/01/2025 ರಲ್ಲಿದ್ದಂತೆ ಶಾಲಾ ಶಿಕ್ಷಣ ಇಲಾಖೆಯ ದ್ವಿತೀಯ ದರ್ಜೆ ದರ್ಜೆ ಸಹಾಯಕ ಸಹಿತ ಬೆರಳಚ್ಚುಗಾರರ ಪ್ರಾರಂಭದ ಮೂಲ ವೃಂದ, ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಈ ಪತ್ರದೊಂದಿಗೆ ಲಗತ್ತಿಸಲಾದ ಪರಿಷ್ಕೃತ ಅನುಬಂಧಗಳಲ್ಲಿ ಇಲಾಖೆಯ ವೆಬ್‌ಸೈಟ್ **www.cpikalaburgi.karnataka.gov.in** ರಲ್ಲಿ ಪ್ರಕಟಿಸಲಾಗಿದ್ದು, ಸದರಿ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಸಂಬಂಧಿಸಿದಂತೆ, ಬಾಧಿತರಾಗಬಹುದಾದಂತಹ, ಸಿಬ್ಬಂದಿಗಳು ಈ ಅಧಿಸೂಚನೆಯನ್ನು ಹೊರಡಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ತಮ್ಮ ಆಕ್ಷೇಪಣೆಗಳಿದ್ದಲ್ಲಿ, ಅದನ್ನು ಸಮರ್ಥಿಸುವಂತಹ ಸೂಕ್ತ ದಾಖಲೆಗಳೊಂದಿಗೆ ಸಂಬಂಧಪಟ್ಟ ಜಿಲ್ಲಾ ಉಪ ನಿರ್ದೇಶಕರ ಮುಖಾಂತರ ಈ ಕಛೇರಿಗೆ ಸಲ್ಲಿಸಲು ತಿಳಿಸಲಾಗಿದೆ. ಈ ನಿಗಧಿತ ಅವಧಿ ಮುಗಿದ ನಂತರ ಬಂದಂತಹ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಲಾಗಿರುತ್ತದೆ.

ಈ ಕಛೇರಿಯಿಂದ ಪ್ರಕಟಿಸಲಾದ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ವಿಭಾಗದ ಜಿಲ್ಲಾ ಉಪನಿರ್ದೇಶಕ ಮುಖಾಂತರ ಯಾವುದೇ ರೀತಿಯ ಆಕ್ಷೇಪಣೆಗಳನ್ನು ಈ ಕಛೇರಿಗೆ ಸ್ವೀಕೃತಿಯಾಗಿರುವುದಿಲ್ಲ. ಪ್ರಯುಕ್ತ, ದಿನಾಂಕ: 01.01.2025ರಲ್ಲಿದ್ದಂತೆ ದ್ವಿತೀಯ ದರ್ಜೆ ಸಹಾಯಕ ಸಹಿತ ಬೆರಳಚ್ಚುಗಾರರ ಪ್ರಾರಂಭದ ಮೂಲ ವೃಂದ, ಸ್ಥಳೀಯ ವೃಂದ ಹಾಗೂ ಉಳಿದ ಮೂಲ ವೃಂದದ ಪ್ರತ್ಯೇಕವಾದ ಅಂತಿಮ ಜೇಷ್ಠತಾ ಪಟ್ಟಿಯನ್ನು ತಯಾರಿಸಿ, ಈ ಅಧಿಸೂಚನೆಗೆ ಲಗತ್ತಿಸಿದ ಅನುಬಂಧಗಳಲ್ಲಿ ಇಲಾಖೆಯ ವೆಬ್‌ಸೈಟ್ **www.cpikalaburgi.karnataka.gov.in** ರಲ್ಲಿ ಪ್ರಕಟಿಸಲಾಗಿದೆ.

**(ಮಾನ್ಯ ಆಯುಕ್ತರ ಆದೇಶದ ಮೇರೆಗೆ)**

Digitally signed by
GANAPATI LAXMANAPPA BAARATAKKE
Date: 2025-08-20 ...:03

**ಸಹ ನಿರ್ದೇಶಕರು (ಆಡಳಿತ)**
ಅಪರ ಆಯುಕ್ತರ ಪರವಾಗಿ

ಪ್ರತಿಗಳನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
3) ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಕಲಬುರಗಿ.
4) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಉಪ ನಿರ್ದೇಶಕರು (ಆಡಳಿತ).
5) ಈ ವಿಭಾಗದ ಎಲ್ಲಾ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ (ಡಯಟ್) ಪ್ರಾಂಶುಪಾಲರುಗಳಿಗೆ.
6) ಈ ವಿಭಾಗದ ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ.
7) ನೋಡಲ್ ಅಧಿಕಾರಿಗಳು, ಇ–ಆಡಳಿತ ಶಾಖೆ, ಆಯುಕ್ತರ ಕಛೇರಿ, ಕಲಬುರಗಿ ರವರಿಗೆ ಸೂಕ್ತ ಕ್ರಮಕ್ಕಾಗಿ.
8) ಕಛೇರಿ ಪ್ರತಿ.